# ಮೈಸೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಸೌಧ
ಕ್ರಾಫರ್ಡ್ ಭವನ ಮೈಸೂರು

ವಿಷಯ: 2019–20ನೇ ಶೈಕ್ಷಣಿಕ ಸಾಲಿಗೆ ಅತಿಥಿ ಉಪನ್ಯಾಸಕರನ್ನು ಆಹ್ವಾನಿಸುವ ಬಗ್ಗೆ.

ಉಲ್ಲೇಖ: 1. ದಿನಾಂಕ 28.06.2019ರ ಸಿಂಡಿಕೇಟ್ ಸಭೆಯ ತೀರ್ಮಾನ.
2. ವಿಶ್ವವಿದ್ಯಾನಿಲಯದ ಅಧಿಸೂಚನೆ ಸಂಖ್ಯೆ ಇಟಿ.11/28/2019–20 ದಿನಾಂಕ.16.08.2019.
3. ಸಂಯೋಜಕರು, ಎಂ.ಟೆಕ್ ಇನ್ ಮೆಟೀರಿಲ್ಸ್ ಸೈನ್ಸ್, ಮಾ.ಗಂ. ಮೈಸೂರು, ಇವರ ಪತ್ರ ಸಂಖ್ಯೆ: ಎಫ್ಎಸ್ಎನ್/248/2019–20 ದಿನಾಂಕ 16.8.2019.
4. ದಿನಾಂಕ: 29.08.2019ರಂದು ನಡೆದ ಆಯ್ಕೆ ಸಮಿತಿ ಸಭೆಯ ನಡಾವಳಿ.

** * **

## ಆದೇಶ ಸಂಖ್ಯೆ: ಇಟಿ8(13)/176/2015–16 ದಿನಾಂಕ 04ನೇ ಸೆಪ್ಟೆಂಬರ್ 2019

ದಿನಾಂಕ: 29.08.2019ರಂದು ನಡೆದ ಆಯ್ಕೆ ಸಮಿತಿ ಸಭೆಯ ಶಿಫಾರಸ್ಸಿನ ಹಾಗೂ ಮಾನ್ಯ ಕುಲಪತಿಯವರ ಅನುಮೋದನೆಯ ಮೇರೆಗೆ, 2019–20ನೇ ಶೈಕ್ಷಣಿಕ ಸಾಲಿನಲ್ಲಿ ಮೈಸೂರು ವಿಶ್ವವಿದ್ಯಾನಿಲಯದ ಸ್ನಾತಕ/ಸ್ನಾತಕೋತ್ತರ ಅಧ್ಯಯನ ವಿಭಾಗಗಳಲ್ಲಿ ವಿದ್ಯಾರ್ಥಿಗಳಿಗೆ ಹೆಚ್ಚುವರಿ ಬೋಧನಾ ಕಾರ್ಯ ನಿರ್ವಹಿಸಲು ಈ ಕೆಳಕಂಡ ಅತಿಥಿ ಉಪನ್ಯಾಸಕರನ್ನು ಆಹ್ವಾನಿಸಲಾಗಿದೆ.

| ಕ್ರಮ ಸಂಖ್ಯೆ | ಅತಿಥಿ ಉಪನ್ಯಾಸಕರ ಹೆಸರು | ವಿಷಯ | ವಾರಕ್ಕೆ ಒಟ್ಟು ಬೋಧನಾ (ಥಿಯರಿ / ಪ್ರಾಕ್ಟಿಕಲ್) ಕಾರ್ಯ (ಗಂಟೆಗಳಲ್ಲಿ) * | ಸ್ನಾತಕೋತ್ತರ ವಿಭಾಗ / ಸ್ನಾತಕೋತ್ತರ ಕೇಂದ್ರ / ಘಟಕ ಕಾಲೇಜು | ಮಾಹೆಯಾನ ಸಂಭಾವನೆ ರೂ.ಗಳಲ್ಲಿ |
|---|---|---|---|---|---|
| 01. | ಡಾ.ಕೆ.ಬಿ.ಹರ್ಷ, ಕಚ್ಚಿಗೆರೆ(ಗ್ರಾ), ಅಂಚೆ, ಮಂಡ್ಯ ತಾ. & ಜಿಲ್ಲೆ–571404. | ಮೇಟಿರಿಯಲ್ ಸೈನ್ಸ್ | 12 | ಎಂ.ಟೆಕ್ ಇನ್ ಮೆಟೀರಿಯಲ್ ಸೈನ್ಸ್ ಕೋರ್ಸ್, ವಿಜ್ಞಾನ ಭವನ. | 22,500/- |

* ಬೋಧನಾ ವಿಷಯ, ಥಿಯರಿ/ಪ್ರಾಕ್ಟಿಕಲ್ ಕಾರ್ಯದ ಬಗ್ಗೆ ಸಂಬಂಧಿಸಿದ ವಿಭಾಗದ ಅಧ್ಯಕ್ಷರು ಹಂಚಿಕೆ ಮಾಡುವರು. **ಎರಡು ಪ್ರಾಯೋಗಿಕ ಬೋಧನಾ ಕಾರ್ಯವು ಒಂದು ಥಿಯರಿ ಬೋಧನಾ ಕಾರ್ಯಕ್ಕೆ ಸಮಾನವಾಗಿರುತ್ತದೆ.**

ಆಹ್ವಾನಿತ ಅತಿಥಿ ಉಪನ್ಯಾಸಕರು ಈ ಆದೇಶ ತಲುಪಿದ 7 ದಿನಗಳೊಳಗೆ ಸಂಬಂಧಪಟ್ಟ ಸಂಯೋಜಕರಲ್ಲಿ ಕರ್ತವ್ಯಕ್ಕೆ ವರದಿ ಮಾಡಿಕೊಳ್ಳತಕ್ಕದ್ದು. ತಪ್ಪಿದಲ್ಲಿ ಈ ಆದೇಶವು ರದ್ದಾಗುತ್ತದೆ.

ಈ ವೆಚ್ಚವನ್ನು ಆಯವ್ಯಯ ಅಂದಾಜುಗಳ "ವೇತನ ಮತ್ತು ಭತ್ಯೆಗಳು" ಖಾತೆಯ "ತಾತ್ಕಾಲಿಕ ಅಧ್ಯಾಪಕರ ವೇತನ" (ಕೋಡ್ 228) ಶೀರ್ಷಿಕೆಯಿಂದ ಭರಿಸಬಹುದಾಗಿದೆ.

**ಷರತ್ತುಗಳು:**

ಅ. ಪ್ರತಿ ವಾರದಲ್ಲಿ 12 ಗಂಟೆಗಳ ಬೋಧನಾ ಕಾರ್ಯನಿರ್ವಹಿಸಲು ಆಹ್ವಾನಿತವಾಗಿರುವ ಅತಿಥಿ ಉಪನ್ಯಾಸಕರುಗಳು ಪ್ರತಿದಿನ ವಿಭಾಗದ ಕೆಲಸದ ಪೂರ್ಣಾವಧಿಯಲ್ಲಿ ಕಡ್ಡಾಯವಾಗಿ ಉಪಸ್ಥಿತರಿದ್ದು, ವಿದ್ಯಾರ್ಥಿಗಳ ಮಾರ್ಗದರ್ಶನಕ್ಕೆ ಲಭ್ಯವಿರಬೇಕು ಹಾಗೂ ಸರ್ಕಾರದ ಸುತ್ತೋಲೆ ಸಂಖ್ಯೆ: ಕಾಶಿಇ/44/ ಅಉನೇ/2012–13ನೇ ಪಾವಿ–1, ದಿನಾಂಕ 02.7.2013ರ ಪ್ರಕಾರ ಕಾರ್ಯ ನಿರ್ವಹಿಸಬೇಕಾಗಿರುತ್ತದೆ.

ಆ. ಅತಿಥಿ ಉಪನ್ಯಾಸಕರು ಪ್ರತಿ ಮಾಹೆಯಲ್ಲಿ ಒಂದು ದಿನ ಸಾಂದರ್ಭಿಕ ರಜೆಯನ್ನು ಪಡೆಯಲು ಅರ್ಹರಿರುತ್ತಾರೆ ಮತ್ತು ಈ ರಜೆ ಅವಧಿಯ ಬೋಧನಾ ಕಾರ್ಯಭಾರವನ್ನು ಮುಂದಿನ ಮಾಹೆಯೊಳಗೆ ಸರಿದೂಗಿಸುವುದು.